# ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:- ಶ್ರೀ ಬಿ.ಸಿ.ವಸಂತಕುಮಾರ್ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಸಾಗರ ಮತ್ತು ಇತರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ:1) ಮುಖ್ಯಕಾರ್ಯನಿರ್ವಾಹಕ ಅದಿಕಾರಿ, ಜಿಲ್ಲಾ ಪಂಚಾಯತಿ.ಶಿವಮೊಗ್ಗ ಇವರ ಪತ್ರಸಂಖ್ಯೆ:ಜಿಪಂಶಿ/ಸಿಬ್ಬಂದಿ(2)/ತಾಪಂ/ಸಿಆರ್/ಎಂಜಿಎನ್‌ಆರ್‌ಇಜಿಎ/39-40/2011-12/12-13. ದಿ:15-02-2014 ಮತ್ತು 03-04-2014.

2) ಸರ್ಕಾರದ ಕಾರಣ ಕೇಳುವ ಸಂಖ್ಯೆ: ಗ್ರಾಅಪ 67ವಿಸೇಬಿ 2013.ದಿನಾಂಕ: 31-05-2014.

3) ಅಪಾದಿತರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳು.

****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ: (1)ರ ಪತ್ರದಲ್ಲಿ, ಸಾಗರ ತಾಲ್ಲೂಕು ತಮರಿ ಮತ್ತು ಭೀಮನೇರಿ ಗ್ರಾ.ಪಂ. ವ್ಯಾಪ್ತಿಯಲ್ಲಿ ಮಹಾತ್ಮಾ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಿರ್ವಹಿಸಿದ ಕಾಮಗಾರಿಗಳಲ್ಲಿ ಮಾರ್ಗಸೂಚಿಯನ್ವಯ ನಿರ್ವಹಿಸದೆ ಅವ್ಯವಹಾರದ ಪ್ರಕರಣದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಅಧಿಕಾರಿ/ನೌಕರರುಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಮುಖ್ಯಕಾರ್ಯನಿರ್ವಾಹಕ ಅದಿಕಾರಿ, ಜಿಲ್ಲಾ ಪಂಚಾಯತಿ.ಶಿವಮೊಗ್ಗ ಇವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

1) ಶ್ರೀ. ಬಿ.ಸಿ.ವಸಂತಕುಮಾರ್.ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ., ಹೊಸನಗರ, ಮತ್ತು ಸಾಗರ

2) ಶ್ರೀ ಸುಭಾಷ್ ಅರ್ಜುನ ನಾಯ್ಕ, ಹಿಂದಿನ ಕಿ.ಇಂ. ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಸಾಗರ

3) ಶ್ರೀ ಎಂ. ಜಿ. ರಮೇಶ್, ಕಿ.ಇಂ. ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಸಾಗರ

ಪ್ರಸ್ತಾವನೆಯನ್ನು ಪರಿಶೀಲಿಸಿ, ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ ಅಧಿಕಾರಿ/ನೌಕರರುಗಳು ಎಸಗಿರುವ ಕರ್ತವ್ಯಲೋಪಗಳ/ದುರ್ನಡತೆಗಳ ಆರೋಪಗಳಿಗೆ ಸಂಬಂಧಿಸಿದಂತೆ, ಮೇಲೆ ಓದಲಾದ ಕ್ರ.ಸಂ.(2)ರ ದಿನಾಂಕ: 31-05-2014 ರಂದು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲು ಉದ್ದೇಶಿಸಿ, ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯ ಅನುಬಂಧ 1 ರಿಂದ 4 ನ್ನು ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಆಪಾದಿತ ಅಧಿಕಾರಿಗಳು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ಅವರುಗಳ ವಿರುದ್ಧದ ಆರೋಪವನ್ನು ನಿರಾಕರಿಸಿ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ. ಅಪಾದಿತ ಅಧಿಕಾರಿಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳು ಒಪ್ಪಲು ಸಮರ್ಥನೀಯವಾಗಿರುವುದಿಲ್ಲವಾದ್ದರಿಂದ ಅವರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಜಂಟಿ ಇಲಾಖಾ ವಿಚಾರಣೆಯನ್ನು ಜರುಗಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 67 ವಿಸೇಬಿ 2013..ಬೆಂಗಳೂರು.ದಿನಾಂಕ:22-02-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀ. ಬಿ.ಸಿ.ವಸಂತಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊಸನಗರ, ಮತ್ತು ಸಾಗರ, ಶ್ರೀ ಸುಭಾಷ್ ಅರ್ಜುನ ನಾಯ್ಕ, ಹಿಂದಿನ ಕಿರಿಯ ಇಂಜಿನೀಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಸಾಗರ ಮತ್ತು ಶ್ರೀ ಎಂ. ಜಿ. ರಮೇಶ್, ಹಿಂದಿನ ಕಿರಿಯ ಇಂಜಿನೀಯರ್ ಪಂಚಾಯತ್ ರಾಜ್

ಇಂಜಿನಿಯರಿಂಗ್ ಉಪ ವಿಭಾಗ ಸಾಗರ, ಇವರುಗಳ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಅದೇ ನಿಯಮಾವಳಿಯ ನಿಯಮ 13 ರನ್ವಯ ಜಂಟಿ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಕೃಷ್ಣಪ್ಪ, ನಿವೃತ್ತ ನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11(5)(ಸಿ) ರ ಪ್ರಕಾರ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ಶಿವಮೊಗ್ಗ ಇವರನ್ನು ಶಿಸ್ತು ಪ್ರಾಧಿಕಾರದ ಪರವಾಗಿ ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನ ಪ್ರಕಾರ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/42/ ಸೇಇವಿ/2014 ದಿನಾಂಕ: 01-08-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 20,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/2/16

( ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಬಿ &ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, (ಎ&ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ)/ಶಿವಮೊಗ್ಗ
3. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ. 1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ ( ಮಂಡನಾಧಿಕಾರಿ)
5. ಆಪಾದಿತ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಶಿವಮೊಗ್ಗ ಇವರ ಮುಖಾಂತರ)

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.